sdmimd

## Vijaya Karnataka

**Date:** August 23, 2014 **Page No.** 03

**Edition:** Mysore **Language:** Kannada

# ಭ್ರಷ್ಟಾಚಾರ ಕ್ಯಾನ್ಸರ್‌ಗಿಂತ ಭಯಾನಕ

## ಎಸ್‌ಡಿಎಂಐಎಂಡಿಯಲ್ಲಿ ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟನೆ

**ವಿಕ ಸುದ್ದಿಲೋಕ** ,ಮೈಸೂರು

ಭ್ರಷ್ಟಾಚಾರ ದೇಶದ ಆರ್ಥಿಕಾಭಿವೃದ್ಧಿಯ ಮೇಲೆ ದುಷ್ಪರಿಣಾಮ ಬೀರಲಿದೆ ಎಂದು ಆಸ್ಟ್ರೇಲಿಯಾದ ಬಾಂಡ್ ವಿಶ್ವವಿದ್ಯಾನಿಲಯದ ಅರ್ಥಶಾಸ್ತ್ರ ಮತ್ತು ಸಂಖ್ಯಾಶಾಸ್ತ್ರದ ಪ್ರಾಧ್ಯಾಪಕ ಡಾ. ಕುಲದೀಪ್ ಕುಮಾರ್ ಆತಂಕ ವ್ಯಕ್ತಪಡಿಸಿದರು.

ಚಾಮುಂಡಿ ಬೆಟ್ಟದ ತಪ್ಪಲಿನ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಇನ್ಸ್‌ಟಿಟ್ಯೂಟ್ ಫಾರ್ ಮ್ಯಾನೇಜ್‌ಮೆಂಟ್ ಡೆವಲಪ್‌ಮೆಂಟ್‌ನ (ಎಸ್‌ಡಿಎಂಐಎಂಡಿ) ಆವರಣದಲ್ಲಿ ಶುಕ್ರವಾರ 'ಹಣಕಾಸು ಮತ್ತು ಲೆಕ್ಕ ಪರಿಶೋಧನೆಯಲ್ಲಿ ಉದಯೋನ್ಮುಖ ಪ್ರವೃತ್ತಿಗಳು' ವಿಷಯ ಕುರಿತು ನಡೆದ ಮೂರನೇ ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ಭ್ರಷ್ಟಾಚಾರ ಎಂಬುದು ಕ್ಯಾನ್ಸರ್ ರೋಗಕ್ಕಿಂತ ಭಯಾನಕ ಎಂದರೂ ತಪ್ಪಿಲ್ಲ. ಅಷ್ಟರ ಮಟ್ಟಿಗೆ ದೇಶವನ್ನು ದುಸ್ಥಿತಿಗೆ ತಳ್ಳಿದೆ. ದೇಶದಲ್ಲಿ ಶೇ.96 ರಷ್ಟು ಮಂದಿ ಭ್ರಷ್ಟಾಚಾರದ ವಿರುದ್ಧ ಮಾತನಾಡುತ್ತಾರೆ. ಆದರೆ ಅವರಲ್ಲಿ ಅನೇಕರು ಅನಿವಾರ್ಯವಾಗಿ ಲಂಚ ನೀಡುವ ಮೂಲಕ ಭ್ರಷ್ಟಾಚಾರಕ್ಕೆ ಪ್ರೇರಣೆ ನೀಡುತ್ತಿದ್ದಾರೆ. ಅಲ್ಲದೆ, ಭ್ರಷ್ಟಾಚಾರದ ವಿರುದ್ಧ ಕ್ರಮ ಜರುಗಿಸುವ ಪ್ರಕ್ರಿಯೆ ನಿಧಾನಗತಿಯಲ್ಲಿ ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ಇ-ಆಡಳಿತದಿಂದ ಮಾತ್ರ ಭ್ರಷ್ಟಾಚಾರ ನಿಯಂತ್ರಣ ಸಾಧ್ಯ ಎಂದು ಸಲಹೆ ನೀಡಿದರು.

ಭ್ರಷ್ಟಾಚಾರದ ಕಡಿವಾಣದಿಂದ ದೇಶಿಯ ಉತ್ಪನ್ನದಲ್ಲಿ ಪ್ರಗತಿ ಕಾಣಲು ಸಾಧ್ಯ. ಸಾರ್ವಜನಿಕ ಕ್ಷೇತ್ರವೇ ಆಗಿರಲಿ, ಖಾಸಗಿ ಕ್ಷೇತ್ರವೇ ಆಗಿರಲಿ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬೇಕು ಎಂದರು.

ಒಂದು ದೇಶದ ಆರ್ಥಿಕ ಹಾಗೂ ಸಾಮಾಜಿಕ ಕ್ಷೇತ್ರಗಳು ಹಿಂದುಳಿಯಲು ಮುಖ್ಯ ಕಾರಣ ಭ್ರಷ್ಟಾಚಾರ ಎಂದು ವಿಶ್ವ ಬ್ಯಾಂಕ್ ಹೇಳಿದೆ. ಈ ಹಿನ್ನೆಲೆಯಲ್ಲಿ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಮುಂದಾಗಬೇಕಿದ್ದು, ತಂತ್ರಜ್ಞಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಹೇಳಿದರು.

ಭ್ರಷ್ಟಾಚಾರ ದೇಶದಲ್ಲಿ ವ್ಯಾಪಕವಾದರೆ ವಿದೇಶಿ ನೇರ ಬಂಡವಾಳ ಹೂಡಿಕೆಗೆ ಪೆಟ್ಟು ಬೀಳಲಿದೆ. ಆದ್ದರಿಂದ ಪ್ರಬಲ ನೀತಿ ಸಂಹಿತೆ ಜಾರಿಗೊಳಿಸಬೇಕು. ತುಂಬ ಸೂಕ್ಷ್ಮ ಕ್ಷೇತ್ರಗಳಾದ ರಿಯಲ್ ಎಸ್ಟೇಟ್, ವಿಮಾನಯಾನ, ರಕ್ಷಣಾ ಕ್ಷೇತ್ರ, ವಿದ್ಯುತ್ ಉಪಕರಣ ಕ್ಷೇತ್ರಗಳಲ್ಲಿ ಗುಣಮಟ್ಟ ಕಾಯ್ದುಕೊಳ್ಳಬೇಕು ಎಂದು ಹೇಳಿದರು.

ಸಮ್ಮೇಳನಾಧ್ಯಕ್ಷ ಡಾ.ಉಲ್ಲಾಸ್ ರಾವ್, ರಾಣೆ ಗ್ರೂಪ್‌ನ ಎಚ್‌ಆರ್, ಐಟಿ ಮತ್ತು ಶಿಕ್ಷಣ ವಿಭಾಗದ ಅಧ್ಯಕ್ಷ ಆರ್. ವೆಂಕಟನಾರಾಯಣ್ ಇದ್ದರು.



ಮೈಸೂರಿನ ಶ್ರೀ ಧರ್ಮ ಸ್ಥಳ ಮಂಜುನಾಥೇಶ್ವರ ಇನ್‌ಸ್ಟಿಟ್ಯೂಟ್ ಫಾರ್ ಮ್ಯಾನೇಜ್‌ಮೆಂಟ್ ಡೆವಲಪ್‌ಮೆಂಟ್‌ನ ಆವರಣದಲ್ಲಿ ಶುಕ್ರವಾರ 'ಹಣಕಾಸು ಮತ್ತು ಲೆಕ್ಕ ಪರಿಶೋಧನೆಯಲ್ಲಿ ಉದಯೋನ್ಮುಖ ಪ್ರವೃತ್ತಿಗಳು' ವಿಷಯ ಕುರಿತು ನಡೆದ ಮೂರನೇ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಆಸ್ಟ್ರೇಲಿಯಾದ ಬಾಂಡ್ ವಿಶ್ವವಿದ್ಯಾನಿಲಯದ ಅರ್ಥಶಾಸ್ತ್ರ ಮತ್ತು ಸಂಖ್ಯಾಶಾಸ್ತ್ರದ ಪ್ರಾಧ್ಯಾಪಕ ಡಾ.ಕುಲದೀಪ್ ಕುಮಾರ್ ಮಾತನಾಡಿದರು.